# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03.11.2024 / 18.40 hrs**

ಮುಖ್ಯಾಂಶಗಳು

**೧. ವಕ್ಫ್ ವಿವಾದ ; ರೈತರಿಗೆ ನೀಡಿರುವ ನೋಟಿಸ್ ತಕ್ಷಣವೇ ಹಿಂಪಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ**

**೨. ಕರಾವಳಿ ಭಾಗಕ್ಕೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ಜಾರಿಗೆ ಸರ್ಕಾರ ಚಿಂತನೆ**

**೩. ಕಾಂಗ್ರೆಸ್ ಸರ್ಕಾರದ ಒಂದೂವರೆ ವರ್ಷದ ಆಡಳಿತದಲ್ಲಿ ಅಭಿವೃದ್ಧಿ ಶೂನ್ಯ ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ**

**೪. ವಿಧಾನಸಭಾ ಉಪಚುನಾವಣೆ - ಚನ್ನಪಟ್ಟಣದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಎನ್‌ಡಿಎ ಅಭ್ಯರ್ಥಿ ಪರ ಮತಯಾಚನೆ ; ಕಾಂಗ್ರೆಸ್‌ನಿಂದಲೂ ಬಿರುಸಿನ ಪ್ರಚಾರ**

**೫. ಬೆಂಗಳೂರಿನಲ್ಲಿ ಪಟಾಕಿ ಅವಘಡ ; ೫೦ಕ್ಕೂ ಹೆಚ್ಚು ಮಂದಿಗೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ**

**<><*<><>*><>**

ವಕ್ಫ್ ವಿಚಾರದಲ್ಲಿ ರೈತರಿಗೆ ನೀಡಲಾಗಿರುವ ನೋಟಿಸ್‌ಗಳನ್ನು ತಕ್ಷಣದಿಂದಲೇ ವಾಪಸ್ ಪಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಕಂದಾಯ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಕ್ಫ್ ಮಂಡಳಿಯ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಇನ್ನು ಮುಂದೆ ರೈತರಿಗೆ ಯಾವುದೇ ರೀತಿಯ ತೊಂದರೆ ನೀಡದಂತೆ ನಿರ್ದೇಶನ ನೀಡಿದ್ದಾರೆ. ರೈತರಿಗೆ ನೋಟಿಸ್ ನೀಡಿರುವ ವಿಚಾರದಲ್ಲಿ ಕೆಲ ಅಧಿಕಾರಿಗಳ ಕಾರ್ಯವೈಖರಿಗೆ ಮುಖ್ಯಮಂತ್ರಿ ಸಭೆಯಲ್ಲಿ ಅಸಮಾದಾನ ವ್ಯಕ್ತಪಡಿಸಿದ್ದಾರೆ.  ರೈತರಿಗೆ ಪಹಣಿ ಬದಲಾವಣೆ ಸಂಬಂಧ ಈಗಾಗಲೇ ನೀಡಿರುವ ನೋಟಿಸ್‌ಗಳನ್ನು ತಕ್ಷಣ ವಾಪಸ್ ಪಡೆಯಬೇಕು. ರೈತರ ಸ್ವಾಧೀನದಲ್ಲಿರುವ ಜಮೀನುಗಳಿಗೆ ಯಾವುದ ರೀತಿಯ ತೊಂದರೆ ನೀಡದಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕಾನೂನು ಬಾಹಿರವಾಗಿ ಹಾಗೂ ನೋಟಿಸ್ ನೀಡದೆ ಪಹಣಿಯಲ್ಲಿ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡಿದ್ದರೆ ತಕ್ಷಣ ರದ್ದು ಮಾಡುವಂತೆ ತಿಳಿಸಿದ್ದಾರೆ.

**<><*<><>*><>**

ಶಕ್ತಿ ಯೋಜನೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಸ್ಪಷ್ಟಪಡಿಸಿದ್ದಾರೆ.  ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಅತ್ಯಂತ ವ್ಯವಸ್ಥಿತವಾಗಿ ನಡೆಯುವ ಶಕ್ತಿಯೋಜನೆ ಬಗ್ಗೆ ಗೊಂದಲ ಸೃಷ್ಟಿಸುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.
ಅನ್ನಭಾಗ್ಯ ಯೋಜನೆಯಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಮಾತ್ರ ನೇರ ನಗದು ವರ್ಗಾವಣೆ ಅನ್ವಯವಾಗುತ್ತದೆ. ಆದರೆ ಶಕ್ತಿ ಯೋಜನೆ ಆ ರೀತಿ ಅಲ್ಲ. ಎಲ್ಲ ಮಹಿಳೆಯರಿಗೂ ಇದರ ಪ್ರಯೋಜನ ದೊರೆಯುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಯುವಕರಿಗೆ ಉದ್ಯೋಗ ಸೃಷ್ಟಿಸಲು ಅನುಕೂಲವಾಗುವಂತೆ ಕರಾವಳಿ ಭಾಗಕ್ಕೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ಜಾರಿಗೆ ತರುವ ಚಿಂತನೆ ನಡೆಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಪುತ್ತೂರಿನಲ್ಲಿ ಅಶೋಕ ಜನ-ಮನ ವಸ್ತ್ರ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಲ್ಲಿನ ಯುವಕರು ಉದ್ಯೋಗ ಅರಸಿ ವಿದೇಶಕ್ಕೆ ಹಾಗೂ ಇತರೆ ರಾಜ್ಯಗಳಿಗೆ ವಲಸೆ ಹೋಗುವುದನ್ನು ತಡೆಯಲು ಪ್ರತ್ಯೇಕ ಪ್ರವಾಸೋದ್ಯಮ ನೀತಿ ಅವಶ್ಯವಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ೫ ಗ್ಯಾರಂಟಿ ಯೋಜನೆಗಳು ಜನರ ಬದುಕಿನಲ್ಲಿ ಆರ್ಥಿಕ ಶಕ್ತಿಯನ್ನು ಹೆಚ್ಚಿಸಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕರ್ನಾಟಕಕ್ಕೆ ಸಿಗಬೇಕಾದ ತೆರಿಗೆ ಪಾಲು ಸಿಕ್ಕರೆ ದೇಶದಲ್ಲೇ ರಾಜ್ಯ ಪ್ರಥಮ ಸ್ಥಾನಕ್ಕೆ ಏರಲಿದೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಗೆಲುವು ಸಾಧಿಸಲಿದ್ದಾರೆ ಎಂದು ಹೇಳಿದ್ದಾರೆ. ಪ್ರತಿಪಕ್ಷಗಳು ಜನರ ಗಮನ ಬೇರೆಡೆ ಸೆಳೆಯಲು ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಹೇಳಿಕೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು, ಸಾಧ್ಯವಿಲ್ಲ ಎಂದಿದ್ದನ್ನು ಸಾಧಿಸುವುದೇ ಕಾಂಗ್ರೆಸ್ ಪಕ್ಷದ ಗುರಿ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳು ರಾಜ್ಯದ ಆರ್ಥಿಕತೆಯನ್ನು ದಿವಾಳಿಯನ್ನಾಗಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕಾಂಗ್ರೆಸ್ ಪಕ್ಷದ ನಾಯಕರೇ ಗ್ಯಾರಂಟಿ ಯೋಜನೆಗಳ ಬಗ್ಗೆ ಅಸಮಾಧಾನ ಪಡಿಸುತ್ತಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ. ಒಂದೂವರೆ ವರ್ಷದ ಆಡಳಿತದಲ್ಲಿ ಸಾಲು ಸಾಲು ಹಗರಣಗಳು, ಸಾಮಾಜಿಕ ಶೋಷಣೆಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಟೀಕಿಸಿದ್ದಾರೆ. ಅಹಿಂದ ವರ್ಗಕ್ಕೆ ನಿಮ್ಮ ಕೊಡುಗೆ ಏನೆಂದು ಪ್ರಶ್ನಿಸಿದ್ದಾರೆ. ಸರ್ಕಾರ ರೈತರಿಗೆ ನೀಡಿರುವ ನೋಟಿಸ್ ವಾಪಸ್ ಪಡೆದರೆ ಸಾಲದು. ಸರ್ಕಾರವನ್ನು ಹೊರಡಿಸಿರುವ ಗೆಜೆಟ್ ವಾಪಸ್ ಪಡೆಯಬೇಕು ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ.

<><*<><>*><>

ಚಾಮುಂಡೇಶ್ವರಿ ಆಶೀರ್ವಾದದಿಂದ ಈ ಬಾರಿ ಚನ್ನಪಟ್ಟಣದಲ್ಲಿ ಎನ್‌ಡಿಎ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಮೈಸೂರಿನಲ್ಲಿ ನಾಡ ಅಧಿದೇವತೆ ಚಾಮುಂಡೇಶ್ವರಿ ತಾಯಿಯ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ಹಿತ ದೃಷ್ಟಿಯಿಂದ ನಿಖಿಲ್ ಸ್ಪರ್ಧೆ ಅನಿವಾರ್ಯವಾಯಿತು ಎಂದು ಸಮರ್ಥಿಸಿಕೊಂಡಿದ್ದಾರೆ. ಗ್ಯಾರಂಟಿ ಜತೆಗೆ ಅಭಿವೃದ್ಧಿ ಮಾಡುವುದು ಕಾಂಗ್ರೆಸ್ ಸರ್ಕಾರಕ್ಕೆ ಬೇಕಿಲ್ಲ. ಹೀಗಾಗಿ ಗ್ಯಾರಂಟಿ ಯೋಜನೆಗಳು ಸ್ಥಗಿತವಾಗುತ್ತವೆ ಎಂಬ ಗೊಂದಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಹೇಳಿದ್ದಾರೆ.

<><*<><>*><>

ಚನ್ನಪಟ್ಟಣ ವಿಧಾನಸಭಾ ಉಪಚುನಾವಣಾ ಕಣ ರಂಗೇರಿದೆ. ವಿರೂಪಸಂದ್ರ ಗ್ರಾಮದಲ್ಲಿ ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ ಯಾಚಿಸಿದರು. ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರನ್ನು ಗೆಲ್ಲಿಸುವಂತೆ ಮನವಿ ಮಾಡಿದರು. ಇನ್ನೊಂದೆಡೆ ನಿಖಿಲ್ ಕುಮಾರಸ್ವಾಮಿ ಕ್ಷೇತ್ರದಲ್ಲಿ ಮನೆ ಮನೆಗೆ ತೆರಳಿ ಮತ ಯಾಚಿಸಿದರು. ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಪರ ಪಕ್ಷದ ಮುಖಂಡರು ಮತ ಯಾಚಿಸಿದರು. ಚನ್ನಪಟ್ಟಣ ತಾಲ್ಲೂಕಿನ ಬೇವೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಶಾಸಕ ಪ್ರದೀಪ್ ಈಶ್ವರ್ ಪ್ರಚಾರ ನಡೆಸಿದರು. ಶಾಸಕ ಪ್ರದೀಪ್ ಈಶ್ವರ್ ಮಾತನಾಡಿ, ಚನ್ನಪಟ್ಟಣಕ್ಕೆ ನೀರಾವರಿ ದೊರಕಿಸುವಲ್ಲಿ ಯೋಗೇಶ್ವರ್ ಪ್ರಮುಖ ಪಾತ್ರ ವಹಿಸಿದ್ದು, ಅವರಿಗೆ ಮತ ನೀಡುವಂತೆ ಮನವಿ ಮಾಡಿದರು.

<><*<><>*><>

ಬೆಂಗಳೂರಿನಲ್ಲಿ ಸಂಭವಿಸಿದ ಪಟಾಕಿ ಅವಘಡದಲ್ಲಿ ಮಕ್ಕಳು, ಮಹಿಳೆಯರು ಸೇರಿದಂತೆ ೫೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಹಲವು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮಿಂಟೋ ಆಸ್ಪತ್ರೆಯಲ್ಲಿ ಸುಮಾರು

೮ ಮಂದಿ ದಾಖಲಾಗಿದ್ದಾರೆ. ನಾರಾಯಣ ನೇತ್ರಾಲಯದಲ್ಲಿ ಒಟ್ಟು ೨೯ ಮಂದಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಅವರಲ್ಲಿ ೧೨ ಮಕ್ಕಳು ಸೇರಿದ್ದಾರೆ. ಉಳಿದಂತೆ ಇತರೆ ಕಣ್ಣಿನ ಆಸ್ಪತ್ರೆಗಳಲ್ಲಿಯೂ ಚಿಕಿತ್ಸೆ ಪಡೆಯುತ್ತಿದ್ದಾರೆ. ಪಟಾಕಿ ಸಿಡಿಸುವ ವೇಳೆ ಸಾರ್ವಜನಿಕರು ಎಚ್ಚರ ವಹಿಸಬೇಕು ಹಾಗೂ ಮಕ್ಕಳ ಕಣ್ಣಿಗೆ ಹಾನಿಯಾಗದಂತೆ ಕನ್ನಡಕ ಧರಿಸಬೇಕು ಎಂದು ಖ್ಯಾತ ನೇತ್ರ ತಜ್ಞ ಡಾ. ರೋಹಿತ್ ಶೆಟ್ಟಿ ಮನವಿ ಮಾಡಿದ್ದಾರೆ.

**<><*<><>*><>**

ಇಂದು ದೀಪಾವಳಿ ಹಬ್ಬದ ಕೊನೆಯ ದಿನ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಬಲಿಪಾಡ್ಯಮಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಗ್ರಾಮೀಣ ಭಾಗಗಳಲ್ಲಿ ಗೋವುಗಳನ್ನು ಅಲಂಕರಿಸಿ ಪೂಜಿಸಲಾಗುತ್ತಿದೆ. ಇನ್ನು ಮಲ್ಲೇನಹಳ್ಳಿ ಸಮೀಪದ ಬಿಂಡಿಗಾ ದೇವಿರಮ್ಮ ದೇವಾಲಯದಲ್ಲಿ ಇಂದು ದೀಪಾವಳಿ ಅಂಗವಾಗಿ ವಿಶೇಷ ಮಹಾಗಣಪತಿ ಪೂಜೆ ನಡೆಸಲಾಗಿದ್ದು ನಾಳೆ ದೇವಾಲಯದಲ್ಲಿ ಕೆಂಡಾರ್ಚನೆ ನಡೆಯಲಿದೆ.

**<><*<><>*><>**

ಕವಿ ಚಕ್ರವರ್ತಿ ರನ್ನ ಕನ್ನಡ ಕಾವ್ಯ, ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ರನ್ನ ಮುಧೋಳ ತಾಲೂಕಿನ ಬೆಳಗಲಿ ಮೂಲದವರಾಗಿದ್ದು, ರನ್ನನ ಇತಿಹಾಸ ಕಾವ್ಯ ಬಿಟ್ಟು ಬೇರೆಯಲ್ಲಿಯೂ ಕುರುಹು ಇಲ್ಲ. ಇದೀಗ ರನ್ನನ ಹೆಸರು ತಾಮ್ರಪಟ ದಾಖಲೀಕರಣ ಜೊತೆಗೆ ತಾಳೆಗರಿಯಲ್ಲಿ ಶೇಖರಿಸಿಡುವ ಸಾಹಸ ಆರಂಭವಾಗಿದೆ. ಮುಧೋಳದ ಹಿರಿಯ ಸಂಶೋಧಕ, ಮೂಡಿ ಲಿಪಿ ತಜ್ಞ ಡಾ.ಸಂಗಮೇಶ ಕಲ್ಯಾಣಿ ಹೊಸ ಯುಗಕ್ಕೆ ವಿಭಿನ್ನ ರೂಪದ ಪ್ರಯತ್ನಕ್ಕೆ ಮುಂದಾಗಿದ್ದು, ಹಲವರು ಇದಕ್ಕೆ ಕೈ ಜೋಡಿಸಿದ್ದಾರೆ. ಕಾವ್ಯದಲ್ಲಿ ಮೂಡಿ ಬಂದಿರುವ ರನ್ನನ ಗದಾಯುದ್ಧವನ್ನು ತಾಳೆಗರಿಯಲ್ಲಿ ಮೂಡಿಸಲು ಮುಂದಾಗಿದ್ದಾರೆ. ಕವಿ ಚಕ್ರವರ್ತಿ ರನ್ನ ಗದಾಯುದ್ಧವನ್ನು ಪದ್ಯ ರೂಪದಲ್ಲಿ ಕಾವ್ಯದಲ್ಲಿ ಕಟ್ಟಿಕೊಟ್ಟಿದ್ದಾರೆ. ತಿ.ನಂ.ಶ್ರೀ ಹಳೇಕನ್ನಡದಲ್ಲಿ ಗದಾಯುದ್ಧವನ್ನು ದಾಖಲಿಸಿದ್ದಾರೆ. ಅವುಗಳಲ್ಲಿ ಪ್ರಮುಖವಾಗಿರುವುದನ್ನು ಆಯ್ಕೆ ಮಾಡಿಕೊಂಡು ಅವತರಣಿಕೆ ಸಹಿತ ಆಯ್ದ ೨೦೦ ಪದ್ಯಗಳನ್ನು ತಾಳೆಗರಿಯಲ್ಲಿ ಬರೆಯಲಾಗುತ್ತದೆ. ಈ ಕುರಿತು ಡಾ.ಸಂಗಮೇಶ ಕಲ್ಯಾಣಿ ಆಕಾಶವಾಣಿ ಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**<><*<><>*><>**

ಶೇಂಗಾ ಬೆಳೆಯಲ್ಲಿ ಕೀಟ ಮತ್ತು ರೋಗಗಳು ಕಂಡು ಬಂದಾಗ ಕೂಡಲೇ ಅವುಗಳ ಸಮಗ್ರ ನಿರ್ವಹಣೆ ಕೈಗೊಳ್ಳಬೇಕು. ಆಗ ಮಾತ್ರ ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವಿದೆ ಎಂದು ಯಾದಗಿರಿ ಸಹಾಯಕ ಕೃಷಿ ನಿರ್ದೇಶಕ ರಾಜಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಯಾದಗಿರಿ ತಾಲ್ಲೂಕಿನ ಬಳಿಚಕ್ರ ಸೇರಿ ಜಿಲ್ಲೆಯ ಯಾದಗಿರಿ, ಶಹಾಪುರ, ವಡಗೇರಾ ತಾಲ್ಲೂಕಿನ ವಿವಿಧ ಗ್ರಾಮಗಳ ಹಿಂಗಾರು ಹಂಗಾಮಿನ ಶೇಂಗಾ ಬೆಳೆಯುವ ಕ್ಷೇತ್ರಗಳಿಗೆ ಭೇಟಿ ನೀಡಿ ಮಾತನಾಡಿದ ಅವರು, ಸುರುಳಿ ಪೂಚಿಯ ಹತೋಟಿಗಾಗಿ ಪೆಪ್ರೋಪೆನೋಪಾಸ್ ೧ ಮಿಲಿ ಲೀಟರ್ ಅಥವಾ ಪಾಸ್ಪಾಮಿಡಾನ್ ೦.೫ ಮಿಲಿ ಲೀಟರ್ ಪ್ರತಿ ಲೀಟರ್ ನೀರಿಗೆ ಸೇರಿಸಿ ಸಿಂಪಡಣೆ ಮಾಡಬೇಕು ಎಂದು ಸೂಚಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಈಶಾನ್ಯ ಮಾನ್ಸೂನ್ ಸಾಮಾನ್ಯವಾಗಿದ್ದು, ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಉತ್ತರ ಒಳನಾಡಿನ ಹಲವೆಡೆ ಮಳೆಯಾಗಿದೆ. ಮಂಡ್ಯ, ಮೈಸೂರು, ಕೊಡಗು, ಚಾಮರಾಜನಗರ ಜಿಲ್ಲೆಯ ಹಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಯ ಹಲವೆಡೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ನಗರ ಜಿಲ್ಲೆಯ ಹಲವೆಡೆ ಗುಡುಗು ಸಹಿತ ಹಗುರ ಮಳೆಯಾಗುವ ಸಾಧ್ಯತೆಯಿದೆ. ಬೆಳಗಿನ ಜಾವ ಮಂಜು ಬೀಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧.    ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಇಂದು ಶಿಡ್ಲಘಟ್ಟ ತಾಲ್ಲೂಕಿನ ಅಮರಾವತಿ ಬಳಿ ನಿರ್ಮಾಣವಾಗುತ್ತಿರುವ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಕಾಮಗಾರಿಯ ಗುಣಮಟ್ಟ ಕಾಪಾಡುವ ಜೊತೆಗೆ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕೆಂದು ಸೂಚಿಸಿದ್ದಾರೆ.(ಚಿಕ್ಕಬಳ್ಳಾಪುರ)

೨.    ಕರ್ನಾಟಕದಲ್ಲಿ ವಕ್ಫ್ ಕಾಯ್ದೆಯ ದುರ್ಬಳಕೆಯ ಕಾರಣಕ್ಕಾಗಿ ರೈತರು ಮಠಮಾನ್ಯಗಳು ಹಿಂದೂ ದೇವಾಲಯಗಳು ಸೇರಿದಂತೆ ಎಲ್ಲರೂ ಆತಂಕದಲ್ಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಚನ್ನಬಸವನಗೌಡ ಪಾಟೀಲ್ ಆರೋಪಿಸಿದ್ದಾರೆ.

೩.    ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಿವೃತ್ತ ಪಿಂಚಣಿದಾರರು ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಸಲ್ಲಿಸುವಂತೆ ನವೆಂಬರ್ ೧ ರಿಂದ ೩೦ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಶಿವಾನಂದ ಹೀರಾಪುರ ತಿಳಿಸಿದ್ದಾರೆ. ಪಿಂಚಣಿದಾರಿಗೆ ಅನುಕೂಲ ಮಾಡಿಕೊಡಲು ಅಂಚೆ ಇಲಾಖೆ ವಿಶೇಷ ಅಭಿಯಾನ ಏರ್ಪಡಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**